**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/07/ಇಸಿಎಸ್(1)/2017

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ:04-07-2018

## ಸುತ್ತೋಲೆ

ವಿಷಯ: ತಾಂತ್ರಿಕ ಪರೀಕ್ಷಾ ಮಂಡಳಿಯ 2003 ವರ್ಷದಲ್ಲಿ ಅಳವಡಿಸಲಾದ ಪಠ್ಯಕ್ರಮದ (C-03) ಸಮಾನತೆ ಇಲ್ಲದ ವಿಷಯಗಳಿಗೆ 2018 ರ ನವೆಂಬರ್/ಡಿಸೆಂಬರ್ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಲು ಅಂತಿಮ ಅವಕಾಶ ನೀಡುವ ಬಗ್ಗೆ.

ಉಲ್ಲೇಖ: ತಾಂತ್ರಿಕ ಪರೀಕ್ಷಾ ಮಂಡಳಿಯ 168ನೇ ಕೇಂದ್ರೀಯ ಸಭೆಯ ನಿರ್ಣಯ ದಿ:03-07-2018

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸುತ್ತೋಲೆಯಲ್ಲಿ, 2003 ರ ಸೆಮಿಸ್ಟರ್ ಪಠ್ಯಕ್ರಮದ (C-03) ವಿಷಯಗಳಿಗೆ ಈಗಾಗಲೇ 2009 ರಲ್ಲಿ ಅಳವಡಿಸಲಾದ ಪಠ್ಯಕ್ರಮದಲ್ಲಿ (C-09) ಸಮಾನತೆ ನೀಡಲಾಗಿದೆ.

ತಾಂತ್ರಿಕ ಪರೀಕ್ಷಾ ಮಂಡಳಿಯ 168ನೇ ಕೇಂದ್ರೀಯ ಸಭೆಯ ನಿರ್ಣಯದಂತೆ, 2003ರ ಸೆಮಿಸ್ಟರ್ ಪಠ್ಯಕ್ರಮದ (C-03) ಒಂದು, ಎರಡು, ಮೂರು, ನಾಲ್ಕು, ಐದು ಮತ್ತು ಆರನೇ ಸೆಮಿಸ್ಟರ್‌ನ (C-09) ಪಠ್ಯಕ್ರಮದಲ್ಲಿ ಸಮಾನತೆ ಇಲ್ಲದ ಪಠ್ಯ ವಿಷಯಗಳಿಗೆ 2018 ರ ನವೆಂಬರ್/ಡಿಸೆಂಬರ್ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಲು ಅಂತಿಮ ಅವಕಾಶ ನೀಡಲಾಗಿದೆ. ನಂತರದ ಮುಂದಿನ ಪರೀಕ್ಷೆಗಳಿಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲವೆಂದು ಮತ್ತು ಇದೇ ಅಂತಿಮ ಅವಕಾಶವೆಂದು ತಿಳಿಸಲಾಗಿದೆ.

ಸಮಾನತೆ ಇಲ್ಲದ ಪ್ರತಿ ವಿಷಯಕ್ಕೆ ವಿದ್ಯಾರ್ಥಿಯಿಂದ ರೂ.1000/- ವಿಶೇಷ ಶುಲ್ಕವನ್ನು ಪಡೆಯಲು ಸಂಬಂಧಿಸಿದ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಸೂಚಿಸಲಾಗಿದೆ ಹಾಗೂ ಈ ವಿಷಯವನ್ನು ಎಲ್ಲಾ ವಿದ್ಯಾರ್ಥಿಗಳ, ಉಪನ್ಯಾಸಕರ ಮತ್ತು ಸಿಬ್ಬಂದಿ ವರ್ಗದವರ ಗಮನಕ್ಕೆ ತರುವಂತೆ ಮತ್ತು ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

ಈ ಸುತ್ತೋಲೆಯನ್ನು ವಿದ್ಯಾರ್ಥಿಗಳ ವಿಳಾಸಕ್ಕೆ ತಪ್ಪದೇ ರಿಜಿಸ್ಟರ್ಡ್ ಅಂಚೆಯ ಮೂಲಕ ಕಳುಹಿಸಿ ದಾಖಲೆಯನ್ನು ಸಂಗ್ರಹಿಸಿ ಇಡಲು ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದಲ್ಲಿನ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿ ಮತ್ತು ಮುಂದಿನ ಅಗತ್ಯ ಕ್ರಮಕ್ಕಾಗಿ.

ಪ್ರತಿ,

1) ಇ – ಗವರ್ನೆನ್ಸ್ ವಿಭಾಗಕ್ಕೆ – ವೆಬ್ ಸೈಟ್‌ನಲ್ಲಿ ಪ್ರಕಟಿಸಲು
2) ಗಣಕ ಕೇಂದ್ರಕ್ಕೆ - ವೆಬ್ ಸೈಟ್‌ನಲ್ಲಿ ಪ್ರಕಟಿಸಲು
3) ಕಾರ್ಯದರ್ಶಿಯವರ ಆಪ್ತ ಶಾಖೆ
4) ಕಡತಕ್ಕೆ